# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1012
2. ಮಾನ್ಯ ಸದಸ್ಯರ ಹೆಸರು : ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 27.12.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಳಗಾವಿ ಸುವರ್ಣಸೌಧದಲ್ಲಿ ಸಕ್ಕರೆ ಆಯುಕ್ತಾಲಯ ಸ್ಥಾಪನೆ ಮಾಡಿರುವುದಾಗಿ ಖುದ್ದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿರುವ ವಿಷಯವು ಕಾರ್ಯರೂಪಕ್ಕೆ ಬಂದಿದೆಯೇ; ಇಲ್ಲದಿದ್ದಲ್ಲಿ ಕಾರಣವೇನು; | ಕರ್ನಾಟಕ ರಾಜ್ಯದ ಉತ್ತರ ಭಾಗದ ಸರ್ವತೋಮುಖ ಅಭಿವೃದ್ಧಿಯನ್ನು ತೀವ್ರಗೊಳಿಸಲು ಹಾಗೂ ಉತ್ತರ ಕರ್ನಾಟಕ ಭಾಗದ ಸಾರ್ವಜನಿಕರಿಗೆ ರಾಜ್ಯದ ಆಡಳಿತವು ಹತ್ತಿರವಾಗಲು ಕರ್ನಾಟಕ ಸರ್ಕಾರದ ಹಲವು ಇಲಾಖೆ / ನಿಗಮ / ಮಂಡಳಿಗಳನ್ನು ಉತ್ತರ ಕರ್ನಾಟಕದ ವಿವಿಧ ಸ್ಥಳಗಳಿಗೆ ವರ್ಗಾಯಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಪಿಡಿ 75 ಯೋಪರ 2018, ದಿನಾಂಕ:10.01.2019 ರಲ್ಲಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯಿಂದ ಅಧಿಸೂಚಿಸಲಾಗಿರುತ್ತದೆ.<br><br>ಇದರಲ್ಲಿ ಬೆಂಗಳೂರಿನಲ್ಲಿರುವ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯವನ್ನು ಬೆಳಗಾವಿಗೆ ಸ್ಥಳಾಂತರಿಸುವ ವಿಷಯವು ಸಹ ಒಳಗೊಂಡಿರುತ್ತದೆ.<br><br>ಮುಂದುವರಿದು, ದಿನಾಂಕ:01.10.2021 ರಿಂದ ಜಾರಿಗೆ ಬರುವಂತೆ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕಚೇರಿಯನ್ನು ಪೂರ್ಣ ಪ್ರಮಾಣದಲ್ಲಿ ಬೆಳಗಾವಿಗೆ ಸ್ಥಳಾಂತರಿಸಲು ಸರ್ಕಾರದ ಆದೇಶ ಸಂಖ್ಯೆ: ಸಿಐ 77 ಸಿಓಎಫ್ 2019, ದಿನಾಂಕ:30.09.2021ರಲ್ಲಿ ಆದೇಶಿಸಲಾಗಿರುತ್ತದೆ. |

| | | |
|---|---|---|
| | | ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕಚೇರಿಯನ್ನು ಪೂರ್ಣ ಪ್ರಮಾಣದಲ್ಲಿ ಬೆಳಗಾವಿಯ ಸುವರ್ಣ ಸೌಧಕ್ಕೆ ಸ್ಥಳಾಂತರಿಸುವವರೆಗೆ ಬೆಳಗಾವಿಯಲ್ಲಿರುವ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಲ್ಲಿ ತಾತ್ಕಾಲಿಕ ಕಚೇರಿಯನ್ನು ಪ್ರಾರಂಭಿಸುವಂತೆ ಸದರಿ ಆದೇಶದಲ್ಲಿ ತಿಳಿಸಲಾಗಿರುತ್ತದೆ.<br><br>ಅದರಂತೆ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕಚೇರಿಯನ್ನು ಬೆಳಗಾವಿಯಲ್ಲಿರುವ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಲ್ಲಿ ತಾತ್ಕಾಲಿಕ ಕಚೇರಿಯನ್ನು ಪ್ರಾರಂಭಿಸಲಾಗಿರುತ್ತದೆ. |
| (ಆ) | ಸರ್ಕಾರದ ನಿಧಾನಗತಿ ಧೋರಣೆಯಿಂದಾಗಿ ಕಬ್ಬು ಬೆಳೆಯುವ ಭಾಗದ ಲಕ್ಷಾಂತರ ರೈತರು ಹಾಗೂ ಸಕ್ಕರೆ ಉದ್ಯಮಿಗಳಿಗೆ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕಚೇರಿಯನ್ನು ಬೆಳಗಾವಿಗೆ ಸ್ಥಳಾಂತರಿಸಲಾಗಿದ್ದು, ಉತ್ತರ ಕರ್ನಾಟಕ ಭಾಗದ ರೈತರು ಮತ್ತು ಸಕ್ಕರೆ ಉಧ್ಯಮಿಗಳಿಗೆ ಇದರಿಂದ ಅನುಕೂಲವಾಗಿರುತ್ತದೆ. |
| (ಇ) | ಕಬ್ಬು ಬೆಳೆಯುವ ರೈತರ ಹಿತದೃಷ್ಟಿಯಿಂದ ಸಕ್ಕರೆ ಆಯುಕ್ತಾಲಯ ಯಾವ ದಿನಾಂಕದಂದು ಕಾರ್ಯನಿರ್ವಹಿಸಲಿದೆ? (ಮಾಹಿತಿ ನೀಡುವುದು) | ದಿನಾಂಕ:07.10.2021ರಿಂದ ಜಾರಿಗೆ ಬರುವಂತೆ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಕಚೇರಿಯನ್ನು ಬೆಳಗಾವಿಗೆ ಸ್ಥಳಾಂತರಿಸಲಾಗಿರುತ್ತದೆ. |

ಸಂಖ್ಯೆ: ಸಿಐ 259 ಸಿಓಎಫ್ 2022

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು